**ಕರ್ನಾಟಕ ಸರ್ಕಾರ**

**ತಾಂತ್ರಿಕ ಶಿಕ್ಷಣ ಇಲಾಖೆ**

ಸಂಖ್ಯೆ:ಬಿಟಿಇ/07/ಇಸಿಎಸ್(1)/2017

ಕಾರ್ಯದರ್ಶಿಯವರ ಕಛೇರಿ
ತಾಂತ್ರಿಕ ಪರೀಕ್ಷಾ ಮಂಡಳಿ
ಅರಮನೆ ರಸ್ತೆ, ಬೆಂಗಳೂರು-1,
ದಿನಾಂಕ: 13-04-2018

**ಸುತ್ತೋಲೆ**

**ವಿಷಯ:** ತಾಂತ್ರಿಕ ಪರೀಕ್ಷಾ ಮಂಡಳಿಯ 2018 ರ ಏಪ್ರಿಲ್/ಮೇ ಡಿಪ್ಲೋಮ ಸೆಮಿಸ್ಟರ್ ಪ್ರಾಯೋಗಿಕ ಪರೀಕ್ಷೆಯ ಸಮಯದಲ್ಲಿ ಮುಖ್ಯ ಅಧೀಕ್ಷಕರು ತೆಗೆದುಕೊಳ್ಳಬೇಕಾದ ಕ್ರಮಗಳ ಬಗ್ಗೆ.

*********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ತಾಂತ್ರಿಕ ಪರೀಕ್ಷಾ ಮಂಡಳಿಯ 2018 ರ ಏಪ್ರಿಲ್/ಮೇ ಡಿಪ್ಲೋಮ ಸೆಮಿಸ್ಟರ್ ಪರೀಕ್ಷೆಗಳನ್ನು ಈ ಕೆಳಕಂಡ ವೇಳಾಪಟ್ಟಿಯಂತೆ ನಡೆಸಲು ನಿಗದಿಪಡಿಸಲಾಗಿದೆ.

**ಪ್ರಾಯೋಗಿಕ ಪರೀಕ್ಷೆಗಳು: ದಿನಾಂಕ:19-04-2018 ರಿಂದ ದಿನಾಂಕ:02-05-2018 ರವರೆಗೆ**

**ಥಿಯರಿ ಪರೀಕ್ಷೆಗಳ ಪ್ರಾರಂಭ ದಿನಾಂಕ:18-05-2018**

ಪರೀಕ್ಷಾ ಕೇಂದ್ರದ ಮುಖ್ಯ ಅಧೀಕ್ಷಕರು, ಬಿಟಿಇ ಲಿಂಕ್ಸ್ ವೆಬ್‌ಪೋರ್ಟಲ್‌ನಲ್ಲಿ ಪ್ರಕಟಿಸಿರುವ ಪ್ರಾಯೋಗಿಕ ಪರೀಕ್ಷಕರುಗಳಿಗೆ ವಿದ್ಯಾರ್ಥಿಗಳ ಬ್ಯಾಚ್‌ಗಳನ್ನು ಹಂಚುವಾಗ ಅವರ ಸೇವಾ ಹಿರಿತನ ಮತ್ತು ಬೋಧನಾನುಭವಗಳನ್ನು ಪರಿಗಣಿಸಿ ವಿದ್ಯಾರ್ಥಿಗಳ ಬ್ಯಾಚ್‌ಗಳನ್ನು ಸಮರ್ಪಕವಾಗಿ ಹಂಚುವುದು ಮತ್ತು ಆಯಾ ದಿನದ ಪರೀಕ್ಷಾ ವೇಳಾಪಟ್ಟಿ, ಪಠ್ಯಕ್ರಮ/ಸ್ಕೀಂ ಆಫ್ ವ್ಯಾಲ್ಯುಯೇಷನ್ ಗಳನ್ನು ಸದರಿ ಪರೀಕ್ಷಕರಿಗೆ ನೀಡಿ ಅವರಿಂದ ಸಹಿ ಪಡೆಯಲು ಸೂಚಿಸಲಾಗಿದೆ.

ಪ್ರಾಯೋಗಿಕ ಪರೀಕ್ಷೆ ನಡೆಸುವ ಇಬ್ಬರೂ ಪರೀಕ್ಷಕರು ಪರೀಕ್ಷೆ ನಡೆಸಲು ಸಮಾನ ಹೊಣೆಗಾರರಾಗಿರುವ ಕಾರಣ, ಇಬ್ಬರೂ ಪರೀಕ್ಷಕರು ಒಟ್ಟಿಗೆ ಪರೀಕ್ಷಾ ಕೇಂದ್ರದ ಪ್ರಾಯೋಗಿಕ ಪರೀಕ್ಷೆಗಳ ಮುಖ್ಯ ಅಧೀಕ್ಷಕರಿಂದ ಪರೀಕ್ಷಾ ವೇಳಾಪಟ್ಟಿ, ಪಠ್ಯಕ್ರಮ/ಸ್ಕೀಂ ಆಫ್ ವ್ಯಾಲ್ಯುಯೇಷನ್ ಪಡೆದು, ಚರ್ಚಿಸಿ ನಿಷ್ಪಕ್ಷಪಾತ ಹಾಗೂ ಜವಾಬ್ದಾರಿಯಿಂದ ಪರೀಕ್ಷೆ ನಡೆಸಿ ಸ್ಕೀಂ ಆಫ್ ವ್ಯಾಲ್ಯುಯೇಷನ್ ಪ್ರಕಾರ ಮೌಲ್ಯಮಾಪನ ಮಾಡಿ ಅಂಕಗಳನ್ನು ನೀಡಲು ತಿಳಸಲಾಗಿದೆ.

ಪ್ರಾಯೋಗಿಕ ಪರೀಕ್ಷೆಗಳನ್ನು ನಿಗದಿತ ಸಮಯದಲ್ಲಿ ನಡೆಸಿ, ಬಿಟಿಇ ಲಿಂಕ್ಸ್ ವೆಬ್‌ಪೋರ್ಟಲ್‌ನಲ್ಲಿ ಮಾರ್ಕ್ಸ್‌ಲಿಸ್ಟ್‌ಗಳಲ್ಲಿನ ಅಂಕಗಳನ್ನು ಆಯಾ ದಿನದ ಅಂತ್ಯದಲ್ಲಿ ಕೀಯಿಂಗ್ ಮಾಡಲು ಸೂಕ್ತ ಕ್ರಮಕೈಗೊಳ್ಳಬೇಕೆಂದು ಮುಖ್ಯ ಅಧೀಕ್ಷಕರುಗಳಿಗೆ ತಿಳಸಲಾಗಿದೆ. **ಪ್ರಾಯೋಗಿಕ ಪರೀಕ್ಷೆ ಮುಕ್ತಾಯವಾದ ತಕ್ಷಣವೇ ಪ್ರಾಯೋಗಿಕ ಪರೀಕ್ಷೆಗಳ ಮಾರ್ಕ್ಸ್‌ಲಿಸ್ಟ್ ಗಳನ್ನು ಬಣ್ಣದ ಬಟ್ಟೆಯಲ್ಲಿ ಪ್ರತ್ಯೇಕವಾಗಿ ಪ್ಯಾಕ್ ಮಾಡಿ ಮಂಡಳಿಗೆ ಕಳುಹಿಸಿ ಕೊಡಲು ತಿಳಸಲಾಗಿದೆ ಮತ್ತು ಪ್ರಾಯೋಗಿಕ ಪರೀಕ್ಷೆಯ ಉತ್ತರ ಪತ್ರಿಕೆಗಳನ್ನು ಬಣ್ಣದ ಬಟ್ಟೆಯಲ್ಲಿ ಪ್ರತ್ಯೇಕವಾಗಿ ಪ್ಯಾಕ್ ಮಾಡಿ, ಬಂಡಲ್‌ಗಳನ್ನು ದಿನಾಂಕ:05-05-2018ರೊಳಗೆ ಮಂಡಳಿಗೆ ಕಳುಹಿಸಿಕೊಡಲು ಸೂಚಿಸಲಾಗಿದೆ.**

ಕಾರ್ಯದರ್ಶಿ

ಇವರಿಗೆ,
ರಾಜ್ಯದಲ್ಲಿನ ಎಲ್ಲಾ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರುಗಳಿಗೆ/ ಪ್ರಾಯೋಗಿಕ ಮತ್ತು ಥಿಯರಿ ಪರೀಕ್ಷೆಯ ಮುಖ್ಯ ಅಧೀಕ್ಷಕರುಗಳಿಗೆ -ಮಾಹಿತಿಗಾಗಿ ಮತ್ತು ಮುಂದಿನ ಕ್ರಮಕ್ಕಾಗಿ

ಪ್ರತಿ:
1. ಇ-ಗವರ್ನೆನ್ಸ್ – ವೆಬ್‌ಸೈಟ್‌ನಲ್ಲಿ ಪ್ರಕಟಿಸಲು
2. ಗಣಕ ಕೇಂದ್ರ – ವೆಬ್ ಪೋರ್ಟಲ್‌ನಲ್ಲಿ ಪ್ರಕಟಿಸಲು
3. ಇಎಪಿ ವಿಭಾಗ
4. ಸಿಸ್ಟಂ ಅನಾಲಿಸ್ಟ್ – ಗಣಕ ಕೇಂದ್ರ
5. ಕಾಯದರ್ಶಿಯವರ ಆಪ್ತಶಾಖೆ